ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಬೀದರ್ ಜಿಲ್ಲೆಯಲ್ಲಿನ ರಾಷ್ಟ್ರೀಯ ಹೆದ್ದಾರಿಯ ಕುರಿತು

ಶ್ರೀರಘುನಾಥ್‌ರಾವ್‌ಮಲ್ಕಾಪುರೆ(ವಿಧಾನಸಭೆಯಿಂದಚುನಾಯಿತರಾದವರು):-

287 (320) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿನ ರಾಷ್ಟ್ರೀಯ ಹೆದ್ದಾರಿಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ರಾಷ್ಟ್ರೀಯ ಹೆದ್ದಾರಿಗಳನ್ನು ಐ.ಆರ್.ಡಿ ಮಾನದಂಡಗಳ ರೀತ್ಯಾ ಅಭಿವೃದ್ಧಿಪಡಿಸಲಾಗಿದೆಯೇ; (ಸ್ಪಷ್ಟ ವಿವರ ಒದಗಿಸುವುದು)

(ಇ) ಬೀದರ್ ಜಿಲ್ಲೆಯಲ್ಲಿ ಹಾಯ್ದು ಹೋಗುವ ಯಾವ ಯಾವ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಗಳಾಗಿ ಮೇಲ್ದರ್ಜೆಗೇರಿಸಲು ಕೇಂದ್ರ ಭೂ-ಸಾರಿಗೆ ಇಲಾಖೆ ತಾತ್ವಿಕ ಅನುಮೋದನೆ ದೊರಕಿದೆಯೇ; (ವಿವರ ನೀಡುವುದು)

(ಈ) ಇವುಗಳಿಗೆ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ ನೀಡಿ ಅಂತಿಮ ಅಧಿಸೂಚನೆ ಹೊರಡಿಸುವ ಕುರಿತು ಮಾಹಿತಿ ಒದಗಿಸುವುದು;

(ಉ) ಬೀದರ್‌ನಿಂದ ತೆಲಂಗಾಣ ರಾಜ್ಯದ ನಿಜಾಂಪೇಟೆವರೆಗಿನ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲಾಗಿದೆಯೇ ; ಹಾಗಿದ್ದಲ್ಲಿ ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಈ ರಸ್ತೆಯನ್ನು ಯಾವಾಗ ಅಭಿವೃದ್ಧಿ ಪಡಿಸಲಾಗುವುದು ?